ನಿರ್ದೇಶಕರ ಕಛೇರಿ
ಅಲ್ಪಸಂಖ್ಯಾತರ ಕಲ್ಯಾಣ
ನಿರ್ದೇಶನಾಲಯ

ಕರ್ನಾಟಕ ಸರ್ಕಾರ

ದೂರವಾಣಿ:080-22864212.
ಫ್ಯಾಕ್ಸ್: 080-22863618.
Email: directorgokdom@gmail.com
Web: www.gokdom.com
20ನೇ ಮಹಡಿ, ವಿಶ್ವೇಶ್ವರಯ್ಯ ಗೋಪುರ,
ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು 560001.

ಸಂಖ್ಯೆ: ಅಸಂನಿ/ಪಿಎ/ಇತರೆ/ಸಿಆರ್-05/2013-14 ದಿನಾಂಕ: 25.03.2014.

ಇವರಿಗೆ,
ಎಲ್ಲಾ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ/ಹಿಂದುಳಿದ ವರ್ಗಗಳ ಮತ್ತು
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ

ಮಾನ್ಯರೇ,

ವಿಷಯ: ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಇತರೆ ಬಡಜನರ ಕಲ್ಯಾಣ ಯೋಜನೆಯಾದ ಶೇ. 7.25 ಯೋಜನೆಯಡಿ ಸೌಲಭ್ಯವನ್ನು ಅಲ್ಪಸಂಖ್ಯಾತರ ವಿದ್ಯಾರ್ಥಿ ನಿಲಯದಲ್ಲಿನ ವಿದ್ಯಾರ್ಥಿಗಳಿಗೆ ಒದಗಿಸಲು ಕ್ರಮ ಕೈಗೊಳ್ಳುವ ಬಗ್ಗೆ.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 415 ಜಿಇಎಲ್ 2011 ದಿನಾಂಕ: 27.02.2012.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಇತರೆ ಬಡಜನರ ಕಲ್ಯಾಣಕ್ಕಾಗಿ ಶೇ. 7.25 ಯೋಜನೆಯಡಿ ವ್ಯಕ್ತಿ ಸಂಬಂಧಿತ ಹಾಗೂ ಸಮುದಾಯ ಸೌಲಭ್ಯಗಳನ್ನು ಒದಗಿಸಲಾಗಿದೆ. ಈ ಯೋಜನೆಯಲ್ಲಿ ಈ ಕೆಳಕಂಡ ಕಾರ್ಯಕ್ರಮಗಳು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಸಂಬಂಧಿಸಿರುತ್ತದೆ.

**ವೈಯಕ್ತಿಕ ಸೌಲಭ್ಯ:**

1) ಶಿಕ್ಷಣ: ವಿವಿಧ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿಶೇಷ ನೆರವು ನೀಡುವುದು
2) ರಾಜ್ಯ/ರಾಷ್ಟ್ರೀಯ ಮಟ್ಟದ ಕ್ರೀಡೆ/ಕಲೆ/ಸಾಂಸ್ಕೃತಿಕ ಹಾಗೂ ಇತರೆ ವ್ಯಾಸಂಗೇತರ (Co-curricular) ಚಟುವಟಿಕೆಗಳಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವುದು.

**ಸಮುದಾಯ ಸೌಲಭ್ಯಗಳು:**

1) ಶಿಕ್ಷಣ: ವಿದ್ಯಾರ್ಥಿ ನಿಲಯಗಳನ್ನು ಉನ್ನತೀಕರಿಸುವುದು.

ಇನ್ನಿತರ ಸೌಲಭ್ಯಗಳು ಈ ಯೋಜನೆಯಡಿ ಇದ್ದು, ಅಲ್ಪಸಂಖ್ಯಾತರ ವಿದ್ಯಾರ್ಥಿ ನಿಲಯಗಳಿಗೆ ಈ ಸೌಲಭ್ಯವನ್ನು ಒದಗಿಸುವ ಬಗ್ಗೆ ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಯೋಜನಾ ನಿರ್ದೇಶಕರು ಹಾಗೂ ಪೌರಾಯುಕ್ತರು ಮತ್ತು ಮುಖ್ಯಾಧಿಕಾರಿಗಳನ್ನು ಸಂಪರ್ಕಿಸಿ ಪ್ರಸ್ತಾವನೆ ಸಲ್ಲಿಸಲು ಕ್ರಮ ಕೈಗೊಳ್ಳಲು ಈ ಮೂಲಕ ಸೂಚಿಸಿದೆ. ಉಲ್ಲೇಖಿತ ಸುತ್ತೋಲೆಯನ್ನು ಮುಂದಿನ ಕ್ರಮಕ್ಕಾಗಿ ಲಗತ್ತಿಸಿದೆ.

ತಮ್ಮ ವಿಶ್ವಾಸಿ,

25/3

ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ,
ಬೆಂಗಳೂರು.